# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ** | : | 400 (359) |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ವಿಷಯ** | : | ತಲಕಾಡನ್ನು ಪ್ರವಾಸೋದ್ಯಮ ಪಟ್ಟಿಗೆ ಸೇರಿಸಿ ಅಭಿವೃದ್ಧಿಪಡಿಸುವ ಬಗ್ಗೆ. |
| **ಉತ್ತರಿಸುವವರು** | : | ಮುಖ್ಯ ಮಂತ್ರಿ |
| **ಉತ್ತರಿಸುವ ದಿನಾಂಕ** | : | 10-12-2020. |

******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ತಲಕಾಡನ್ನು ಪ್ರವಾಸೋದ್ಯಮ ಇಲಾಖೆಗೆ ಗುರುತಿಸಿರುವ ಐತಿಹಾಸಿಕ ಪ್ರವಾಸೋದ್ಯಮ ಸ್ಥಳಗಳ ಪ್ರವಾಸೋದ್ಯಮ ಪಟ್ಟಿಗೆ ಸೇರಿಸುವಂತೆ ಮನವಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಪ್ರವಾಸೋದ್ಯಮ ಇಲಾಖೆಯಿಂದ ಗುರುತಿಸಲ್ಪಟ್ಟ ಪ್ರವಾಸಿ ತಾಣಗಳ ಪಟ್ಟಿಯಲ್ಲಿ ತಲಕಾಡು ಸೇರಿರುತ್ತದೆ. |
| ಆ) | ತಲಕಾಡು, ಮುಡುಕುತೊರೆ, ಮಾಧವಮಂತ್ರಿ ಅಣೆಕಟ್ಟು, ಇವರುಗಳನ್ನು ಪ್ರವಾಸೋದ್ಯಮ ಪಟ್ಟಿಗೆ ಸೇರಿಸಿ ಅಭಿವೃದ್ಧಿಪಡಿಸಲು ಹಾಗೂ ಮಾಧವ ಮಂತ್ರಿ ಅಣೆಕಟ್ಟಿನಲ್ಲಿ ದೋಣಿ ವಿಹಾರ ಕೇಂದ್ರ ಆರಂಭಿಸಲು ಸರ್ಕಾರದಿಂದ ಕ್ರಮ ಜರುಗಿಸಲಾಗುವುದೇ: | 2015-20ರ ಪ್ರವಾಸೋದ್ಯಮ ನೀತಿಯನ್ವಯ ಗುರುತಿಸಿರುವ 319 ಪ್ರವಾಸಿ ತಾಣಗಳ ಪಟ್ಟಿಯಲ್ಲಿ ತಲಕಾಡು ಸೇರ್ಪಡೆಯಾಗಿರುತ್ತದೆ.<br><br>ಮುಡುಕುತೊರೆ ಮತ್ತು ಮಾಧವಮಂತ್ರಿ ಅಣೆಕಟ್ಟನ್ನು ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ತಾಣಗಳೆಂದು ಗುರುತಿಸಿರುವುದಿಲ್ಲ. 2020-25ರ ನೀತಿಯನ್ವಯ ಪ್ರವಾಸಿ ತಾಣಗಳ ಪಟ್ಟಿಯ ಪರಿಶೀಲನಾ ಕಾರ್ಯ ಪ್ರಗತಿಯಲ್ಲಿದ್ದು, ಅಂತಿಮಗೊಳಿಸುವಾಗ ಇವುಗಳನ್ನು ಪರಿಶೀಲಿಸಲಾಗುವುದು.<br><br>ಪ್ರಸ್ತುತ, ಮಾಧವಮಂತ್ರಿ ಅಣೆಕಟ್ಟಿನಲ್ಲಿ ದೋಣಿ ವಿಹಾರ ಕೇಂದ್ರ ಆರಂಭಿಸುವ ಸಂಬಂಧ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಇ) | ಮುಡುಕುತೊರೆ ಮಲ್ಲಿಕಾರ್ಜುನ ದೇವಾಲಯದ ಪುನರ್ ನಿರ್ಮಾಣ ಕಾರ್ಯದಲ್ಲಿ ಅಲ್ಲಿರುವ ಪ್ರಾಚೀನ ವರ್ಣಚಿತ್ರಗಳಿಗೆ / ಶಿಲ್ಪಿಗಳಿಗೆ ಧಕ್ಕೆ ಆಗದಂತೆ ಎಚ್ಚರಿಕೆ ವಹಿಸಿ ಕಾಮಗಾರಿ ನಿರ್ವಹಿಸಲು ಕ್ರಮ ವಹಿಸಲಾಗುವುದೆ? | ಮುಡುಕುತೊರೆ ಶ್ರೀ ಮಲ್ಲಿಕಾರ್ಜುನ ದೇವಾಲಯವು ಧಾರ್ಮಿಕ ದತ್ತಿ ಇಲಾಖೆಗೆ ಒಳಪಟ್ಟಿರುತ್ತದೆ.<br><br>ಮುಡುಕುತೊರೆ ಮಲ್ಲಿಕಾರ್ಜುನ ದೇವಾಲಯದ ಪುನರ್ ನಿರ್ಮಾಣದ ಸಂಬಂಧ ಪ್ರಸ್ತುತ ಇಡೀ ದೇವಾಲಯವನ್ನು ಪುನರ್ ನಿರ್ಮಾಣ ಮಾಡಲಾಗುತ್ತಿದ್ದು, ಈ ದೇವಾಲಯದ ಚಿತ್ರಕಲೆಯನ್ನು ಉಳಿಸಿಕೊಳ್ಳಲು ದೇವಾಲಯದ ಅಭಿವೃದ್ಧಿ ಸಮಿತಿಯ ಸಭೆಯಲ್ಲಿ ಚರ್ಚಿಸಿ, ತಜ್ಞ ತಾಂತ್ರಿಕ ಸಮಿತಿಯ ಸಲಹೆ ಪಡೆದುಕೊಂಡು ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ. |

ಸಂಖ್ಯೆ: ಟಿಆರ್ 248 ಟಿಡಿವಿ 2020

(ಬಿ.ಎಸ್. ಯಡಿಯೂರಪ್ಪ)
ಮುಖ್ಯ ಮಂತ್ರಿ